ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: 6 ಗೃಹ - ಸಿ.ಡಿ ಪ್ರಕರಣ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ

ದಿನಾಂಕ : DATE : 22/3/2021

# ಸಿ.ಡಿ ಪ್ರಕರಣ: ಬ್ಯಾಂಕ್ ಮಾಹಿತಿ ಕೋರಿದ ಎಸ್‌ಐಟಿ

ಪ್ರ.ವಾ. 22.3.21

ಬೆಂಗಳೂರು:ಸಿ.ಡಿ ಪ್ರಕರಣದ ಆರೋಪಿಗಳು ಎನ್ನಲಾಗಿರುವವರ ಜೊತೆ ಸಂಪರ್ಕ ಹಾಗೂ ಆರೋಪಿಗಳಿಗೆ ನೆರವು ನೀಡಿರುವ ಆರೋಪದಡಿ ಗ್ರಾನೈಟ್ ಉದ್ಯಮಿ ಶಿವಕುಮಾರ್ ಎಂಬುವರ ಮನೆ ಮೇಲೆ ದಾಳಿ ನಡೆಸಿದ್ದ ವಿಶೇಷ ತನಿಖಾ ತಂಡ (ಎಸ್‌ಐಟಿ), ಆತನ ಹಣ ವರ್ಗಾವಣೆ ಸಂಬಂಧ ಬ್ಯಾಂಕ್‌ನಿಂದ ಮಾಹಿತಿ ಕೋರಿರುವುದಾಗಿ ಮೂಲಗಳು ತಿಳಿಸಿವೆ.

ಬಿಜೆಪಿ ಶಾಸಕ ರಮೇಶ ಜಾರಕಿಹೊಳಿ ಅವರದ್ದು ಎನ್ನಲಾದ ಸಿ.ಡಿ ಪ್ರಕರಣದ ಆರೋಪಿಗಳೊಂದಿಗೆ ಶಿವಕುಮಾರ್ ಸಂಪರ್ಕದಲ್ಲಿದ್ದರು ಎಂಬ ಮಾಹಿತಿ ಎಸ್‌ಐಟಿಗೆ ಸಿಕ್ಕಿತ್ತು. ಹಾಗಾಗಿ, ನ್ಯಾಯಾಲಯದಿಂದ ವಾರಂಟ್ ಪಡೆದು, ಜೆ.ಪಿ.ನಗರದಲ್ಲಿದ್ದ ಶಿವಕುಮಾರ್ ಮನೆಯ ಮೇಲೆ ಎಸ್‌ಐಟಿ ಅಧಿಕಾರಿಗಳು ಶನಿವಾರ ದಾಳಿ ನಡೆಸಿದ್ದರು. ದಾಳಿ ವೇಳೆ ಸಿಕ್ಕಿದ್ದ ಕೆಲವು ಮಹತ್ವದ ದಾಖಲೆಗಳನ್ನು ಜಪ್ತಿ ಮಾಡಿದ್ದರು.

ಆರೋಪಿಗಳೊಂದಿಗೆ ಒಡನಾಟ ಹಾಗೂ ನೆರವು ನೀಡಿದ್ದ ಮಾಹಿತಿ ಅನ್ವಯ ಶಿವಕುಮಾರ್ ಅವರ ಹಣ ಪಾವತಿ ಹಾಗೂ ವರ್ಗಾವಣೆ ಸಂಬಂಧ ಮಾಹಿತಿ ಕಲೆ ಹಾಕಲು ಎಸ್‌ಐಟಿ ಮುಂದಾಗಿದ್ದು, ಈ ಬಗ್ಗೆ ಮಾಹಿತಿ ನೀಡುವಂತೆ ಶಿವಕುಮಾರ್ ಅವರು ಖಾತೆ ಹೊಂದಿರುವ ಬ್ಯಾಂಕ್‌ಗೆ ಪತ್ರ ಬರೆದಿರುವುದಾಗಿ ಮೂಲಗಳು ತಿಳಿಸಿವೆ.